**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 09–10–2017**

# ಪತ್ರಿಕಾ ಆಮಂತ್ರಣ

1. ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ – 2017:

ಉದ್ಘಾಟನೆ:
ಜೈಶಂಕರ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ನಗರ ಜಿಲ್ಲೆ.

**ಅಧ್ಯಕ್ಷತೆ:**
**ಸೋಮಶೇಖರ್ ಎಂ. ಮುಖ್ಯ ಅಧೀಕ್ಷಕರು, ಕೇಂದ್ರ ಕಾರಾಗೃಹ, ಪರಪ್ಪನ ಅಗ್ರಹಾರ, ಬೆಂಗಳೂರು.**

ದಿನಾಂಕ: 10–10–2017, ಮಂಗಳವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ಕೇಂದ್ರ ಕಾರಾಗೃಹ, ಪರಪ್ಪನ ಅಗ್ರಹಾರ, ಬೆಂಗಳೂರು

2. ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ ಬೆಳ್ಳಿಹೆಜ್ಜೆ ಕಾರ್ಯಕ್ರಮ:

ಅತಿಥಿ:
ಡಾ. ಜಿ. ಮನೋಹರನ್ ನಾಯ್ಡು, ಲಹರಿ ಸಂಸ್ಥೆ.

ದಿನಾಂಕ: 10–10–2017, ಮಂಗಳವಾರ, ಸಮಯ: ಸಂಜೆ 5.00 ಗಂಟೆಗೆ

ಸ್ಥಳ: ಮಹದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಕುಮಾರಪಾರ್ಕ್ ರಸ್ತೆ, ಬೆಂಗಳೂರು.

ಸಂಖ್ಯೆ 165/285

**ಪತ್ರಿಕಾ ಪ್ರಕಟಣೆ**

## ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಮಾನ್ಯತೆ : ಕೇಂದ್ರ ಸಚಿವರಾದ ಜಾವಡೆಕರ್ ಸಭೆ ಕರೆಯುವಂತೆ ರಾಜ್ಯ ಮತ್ತೊಮ್ಮೆ ಮನವಿ : ಉನ್ನತ ಶಿಕ್ಷಣ ಸಚಿವ ಬಸವರಾಜರಾಯ ರೆಡ್ಡಿ

**ಬೆಂಗಳೂರು, ಅಕ್ಟೋಬರ್ 09 ( ಕರ್ನಾಟಕ ವಾರ್ತೆ) :**

ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾಲಯದ ಮಾನ್ಯತೆ ನೀಡುವ ಕುರಿತಂತೆ ಕೇಂದ್ರ ಸಂಪನ್ಮೂಲ ಸಚಿವ ಪ್ರಕಾಶ್ ಜಾವಡೇಕರ್ ನೇತೃತ್ವದಲ್ಲಿ ಕೂಡಲೇ ಸಭೆ ಕರೆಯುವಂತೆ ಉನ್ನತ ಶಿಕ್ಷಣ ಸಚಿವ ಬಸವರಾಜರಾಯರೆಡ್ಡಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ವಿಧಾನಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕೇಂದ್ರ ಸಚಿವರಿಗೆ ಬರೆದಿರುವ ಪತ್ರವನ್ನು ಬಿಡುಗಡೆಮಾಡಿ ಯು.ಜಿ.ಸಿ. ಆದೇಶದಂತೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಮಾನ್ಯತೆಗಾಗಿ ವಿಶೇಷ ಕಾನೂನನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದ್ದು, ಅದರ ಪ್ರತಿಯನ್ನು ಸಹ ಕೇಂದ್ರ ಸಚಿವರಿಗೆ, ವಿಶ್ವವಿದ್ಯಾಲಯದ ಧನಸಹಾಯ ಆಯೋಗಕ್ಕೂ ನೀಡಲಾಗಿದೆ. ಆದರೆ ಯು.ಜಿ.ಸಿ. ರಾಜ್ಯದ ಮನವಿಯನ್ನು ಪುರಸ್ಕರಿಸಿಲ್ಲ. ಈ ಗೊಂದಲ ನಿವಾರಣಗಾಗಿ ಕೇಂದ್ರ ಮಾನವ ಸಂಪನ್ಮೂಲ ಸಚಿವರ ಸಭೆ ಕರೆದು ಈ ಸಮಸ್ಯೆ ಇತ್ಯರ್ಥಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಮುಚ್ಚುವ ಬದಲು ಪರ್ಯಾಯದ ಕ್ರಮದ ಬಗ್ಗೆಯು ಪರಾಮರ್ಶಿಸಲು ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲಾಗಿದ್ದು ಒಂದು ತಿಂಗಳ ಒಳಗಾಗಿ ಸರ್ಕಾರಕ್ಕೆ ವರದಿ ನೀಡಲಿದೆ ಎಂದರು.

ಕಲಬುರಗಿಯಲ್ಲಿರುವ ಗುಲ್ಬರ್ಗ ವಿಶ್ವ ವಿದ್ಯಾಲಯಕ್ಕೆ ಬಸವೇಶ್ವರ ವಿಶ್ವ ವಿದ್ಯಾಲಯವೆಂದು ಹಾಗೂ ಕೇಂದ್ರೀಯ ವಿಶ್ವವಿದ್ಯಾಲಯಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ವಿಶ್ವ ವಿದ್ಯಾಲಯವೆಂದು

ನಾಮಕರಣ ಮಾಡಲು ಕೇಂದ್ರ ಸಚಿವರಿಗೆ ಮನವಿ ಮಾಡಿರುವುದಾಗಿ ಸಚಿವ ಬಸವರಾಜರಾಯರೆಡ್ಡಿ ಅವರು ತಿಳಿಸಿದರು.

ಧಾರವಾಡದಲ್ಲಿ ಆರಂಭವಾಗಿರುವ ಐ.ಐ.ಟಿ. ಗೆ ರಾಜ್ಯ ಸರ್ಕಾರ 500 ಎಕರೆ ಜಮೀನು ನೀಡಿದ್ದು ರಾಜ್ಯದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದಲ್ಲಿ ಅಧ್ಯಯನಮಾಡಲು ಕನಿಷ್ಠ ಶೇ 25 ರಷ್ಟು ಸೀಟುಗಳ ಮೀಸಲಾತಿ ಸೌಲಭ್ಯ ಕಲ್ಪಿಸಬೇಕು ಎಂಬ ರಾಜ್ಯದ ಮನವಿಗೆ ಕೇಂದ್ರ ಸರ್ಕಾರ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಇದು ಸೇರಿದಂತೆ ಉನ್ನತ ಶಿಕ್ಷಣದ ಹಲವು ವಿಷಯಗಳ ಕುರಿತಂತೆ ಕೇಂದ್ರ ಸಚಿವ ಪ್ರಕಾಶ ಜಾವಡೇಕರ್ ಕರೆಯುವ ಸಭೆಯಲ್ಲಿ ಪ್ರಸ್ತಾಪಿಸಲಾಗುವುದು ಎಂದು ಸಚಿವರು ತಿಳಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

<u>ಸಂಖ್ಯೆ 166/286</u>

## ಡಿಸೆಂಬರ್‌ನಲ್ಲಿ ಮುಖ್ಯಮಂತ್ರಿ ಅನಿಲಭಾಗ್ಯ ಯೋಜನೆಗೆ ಚಾಲನೆ : ಸಚಿವ ಯು.ಟಿ. ಖಾದರ್

ಬೆಂಗಳೂರು, ಅಕ್ಟೋಬರ್ 09 ( ಕರ್ನಾಟಕ ವಾರ್ತೆ) :

ಮುಖ್ಯಮಂತ್ರಿ ಅನಿಲ ಭಾಗ್ಯ ಯೋಜನೆಯಡಿ ಕಡುಬಡವರಿಗೆ 4040 ರೂ. ವೆಚ್ಚದಲ್ಲಿ ಅಡುಗೆ ಅನಿಲ ಸಿಲಿಂಡರ್ ಮತ್ತು ಗ್ಯಾಸ್ ಸ್ಟೌವ್‌ನ್ನು ಸುಮಾರು 15 ಲಕ್ಷ ಬಡವರಿಗೆ ಸಂಪರ್ಕ ಕಲ್ಪಿಸುವ ಯೋಜನೆಗೆ ಆನ್‌ಲೈನ್ ಮೂಲಕ ಈ ತಿಂಗಳಲ್ಲಿ ಅರ್ಜಿ ಆಹ್ವಾನ ಮಾಡಲು ತೀರ್ಮಾನಿಸಲಾಗಿದೆ ಎಂದು ಆಹಾರ ಮತ್ತು ನಾಗರೀಕ ಪೂರೈಕೆ ಸಚಿವ ಯು.ಟಿ. ಖಾದರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿಂದು ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಂತರ ಸಚಿವರು ವಿವರ ನೀಡಿದರು.+

ರಾಜ್ಯದಲ್ಲಿ 1.10 ಕೋಟಿ ಬಿ.ಪಿ.ಎಲ್ ಕುಟುಂಬಗಳಿದ್ದು ಆ ಪೈಕಿ ಶೇ 80 ರಷ್ಟು ಅನಿಲ ಸಂಪರ್ಕ ಹೊಂದಿರುವುದಾಗಿ ತೈಲ ಕಂಪನಿಗಳೂ ನೀಡಿರುವ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಕೇಂದ್ರ ಸರ್ಕಾರ ಉಜ್ವಲ ಯೋಜನೆಯಡಿ ಕೆಲವು ಜನರಿಗೆ ಸ್ಟೌವ್‌ಗಳನ್ನು ಹಾಗೂ

ರೆಗ್ಯೂಲೇಟರ್‌ಗಳನ್ನು ವಿತರಿಸಲಾಗುತ್ತಿದೆ. ಉಜ್ವಲ ಯೋಜನೆಯಡಿಯಲ್ಲಿ ಬಿಟ್ಟು ಹೋಗಿರುವ ಕಡುಬಡವರಿಗೆ ರಾಜ್ಯ ಸರ್ಕಾರ ಮುಖ್ಯಮಂತ್ರಿ ಅನಿಲ ಭಾಗ್ಯ ಯೋಜನೆಯಡಿ ಅಡುಗೆ ಅನಿಲದ ಸಿಲಿಂಡರ್, ಸ್ಟೌವ್, ರೆಗ್ಯೂಲೇಟರ್ ಹಾಗೂ ಪ್ರಾರಂಭಿಕವಾಗಿ ಎರಡು ಸಿಲಿಂಡರ್‌ಗಳನ್ನು ಉಚಿತವಾಗಿ ವಿತರಿಸಲಾಗುತ್ತದೆ ಎಂದರು.

ಈ ಯೋಜನೆಯ ಫಲಾನುಭವಿಗಳು ಆನ್‌ಲೈನ್ ಅರ್ಜಿ ಜೊತೆಗೆ ಆಧಾರ ಸಂಖ್ಯೆಯನ್ನು ಕಡ್ಡಾಯವಾಗಿ ನೊಂದಾಯಿಸಬೇಕು ಎಂದು ಷರತ್ತು ವಿಧಿಸಲಾಗಿದೆ. ಉಜ್ವಲ ಯೋಜನೆಯಡಿ ಫಲಾನುಭವಿಗಳು ಅನಿಲ ಸಂಪರ್ಕ ಹೊಂದಿರುವವರಿಗೆ ಈ ಯೋಜನೆಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಎಂದು ಸಚಿವ ಯು.ಟಿ. ಖಾದರ್ ಅವರು ಸ್ಪಷ್ಟಪಡಿಸಿದರು.

ಫಲಾನುಭವಿಗಳು ಅರ್ಜಿ ಸಲ್ಲಿಸಲು ಗ್ರಾಮ ಪಂಚಾಯಿತಿಗಳ ಮಟ್ಟದಲ್ಲಿಯೇ ಎಲ್ಲಾ ಮಾಹಿತಿಗಳನ್ನು ನಮೂದಿಸಿ ಆಧಾರ್ ಸಂಖ್ಯೆ ಜೋಡಣೆ ಮಾಡಬೇಕು ಎಂದು ಅವರು ತಿಳಿಸಿದರು.

ಮುಖ್ಯಮಂತ್ರಿ ಅನಿಲ ಭಾಗ್ಯ ಯೋಜನೆಯ ಫಲಾನುಭವಿಗಳಿಗೆ ಡಿಸೆಂಬರ್‌ನಲ್ಲಿ ಅನಿಲ ಸಂಪರ್ಕವನ್ನು ಕಲ್ಪಿಸಲಾಗುವುದು ಎಂದು ಸಚಿವರು ತಿಳಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 167/287

## ಸಚಿವರ ಪ್ರವಾಸ

**ಬೆಂಗಳೂರು, ಅಕ್ಟೋಬರ್ 09 ( ಕರ್ನಾಟಕ ವಾರ್ತೆ) :**

ಮೀನುಗಾರಿಕೆ, ಯುವಸಬಲೀಕರಣ ಮತ್ತು ಕ್ರೀಡಾ ಸಚಿವ ಪ್ರಮೋದ್ ಮಧ್ವರಾಜ್ ಅವರು ಅಕ್ಟೋಬರ್ 10 ರಂದು ಉಡುಪಿ ಜಿಲ್ಲೆಯ ಕಾರ್ಕಳ ಮತ್ತು ಮಣಿಪಾಲದಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 168/288

# ಅನುತ್ತಮ ಗುಣಮಟ್ಟದ ಔಷಧ ಮಾರಾಟ ಮಾಡಿದ ಅಂಗಡಿ ಮಾಲೀಕರಿಗೆ ಶಿಕ್ಷೆ- ದಂಡ ವಸೂಲಿ

ಬೆಂಗಳೂರು, ಅಕ್ಟೋಬರ್ 09 ( ಕರ್ನಾಟಕ ವಾರ್ತೆ) :

ಔಷಧ ನಿಯಂತ್ರಣ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿ ಅನುತ್ತಮ ಗುಣಮಟ್ಟದ ಔಷಧ ಮಾರಾಟ ಮಾಡುತ್ತಿದ್ದ ಹಲವು ಅಂಗಡಿಗಳ ಮಾಲೀಕರ ವಿರುದ್ಧ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ ಪರಿಣಾಮ ನ್ಯಾಯಾಲಯ ತೀರ್ಪನ್ನು ಪ್ರಕಟಿಸಿದೆ.

ಈ ಹಿನ್ನೆಲ್ಲೆಯಲ್ಲಿ ಮೆ: ಆಕ್ಸೋ ರಿಸರ್ಚ್ ಲ್ಯಾಬೋರೇಟರೀಸ್, 234/ಬಿ, ರಾಮಬಾಲಿ ನಗರ, ಇಂಡಸ್ಟ್ರಿಯಲ್ ಎಸ್ಟೇಟ್ , ದಾವಣಗೆರೆ ಇವರ ವಿರುದ್ಧ ಪ್ರಕರಣ ದಾಖಲಿಸಿ, ಔಷಧ ಮತ್ತು ಕಾಂತಿವರ್ಧಕ ಅದಿನಿಯಮ ಉಲಂಘನೆ ಮಾಡಿದ್ದಕ್ಕಾಗಿ ಮೂರು ಆರೋಪಿಗಳಿಂದ ತಲಾ 20,000 ರೂ. ದಂಡ ವಸೂಲಿ ಮಾಡಲಾಗಿದೆ.

ಉತ್ತರಕಾಂಡ ಹರಿದ್ವಾರ ಜಿಲ್ಲೆಯ ಮೆರ್ ಪ್ರಾನಿಸ್ ರೆಮಿಡೀಸ್ (ಇಂತಿಯಾ) ಪ್ರೈ. ಲಿ. ಅವರ ವಿರುದ್ಧ ಪ್ರಕರಣ ದಾಖಲಿಸಿ ಔಷಧ ಮತ್ತು ಕಾಂತಿವರ್ಧಕ ಅದಿನಿಯಮ ಉಲಂಘನೆ ಮಾಡಿದ್ದಕ್ಕಾಗಿ ಮೂರು ಆರೋಪಿಗಳಿಂದ ತಲಾ 20,000 ರೂ. ದಂಡ ವಸೂಲಿ ಮಾಡಲಾಗಿದೆ.

ಇಂಡೋರ್ ಮೇ ಕ್ವಿಸ್ಟ್ ಲ್ಯಾಬೋರೇಟರೀಸ್ ಪ್ರೈ. ಲಿ. ಇವರ ವಿರುದ್ಧ ಪ್ರಕರಣ ದಾಖಲಿಸಿ ಔಷಧ ಮತ್ತು ಕಾಂತಿವರ್ಧಕ ಅದಿನಿಯಮ ಉಲಂಘನೆ ಮಾಡಿದ್ದಕ್ಕಾಗಿ ಜೆ.ಎಂ.ಎಫ್. ಸಿ. ನ್ಯಾಯಾಲಯ, ಜೀವರ್ಗಿಯಲ್ಲಿ ಪ್ರಕರಣ ದಾಖಲಿಸಿ ಇಬ್ಬರು ಆರೋಪಿಗಳಿಂದ ತಲಾ 20,000 ರೂ. ದಂಡ ವಸೂಲಿ ಮಾಡಲಾಗಿದೆ ಹಾಗೂ ಇದೇ ಇನ್ನೊಂದು ಪ್ರಕರಣಗಳಲ್ಲಿ ಇಬ್ಬರು ಆರೋಪಿಗಳಿಂದ ಜೆ.ಎಂ.ಎಫ್.ಸಿ. ನ್ಯಾಯಾಲಯ, ಬೆಂಗಳೂರು ಇಲ್ಲಿ ಪ್ರಕರಣ ದಾಖಲಿಸಿ ಇಬ್ಬರು ಆರೋಪಿಗಳಿಂದ ತಲಾ 20,000 ರೂ. ದಂಡ ವಸೂಲಿ ಮಾಡಲಾಗಿದೆ.

ಬೆಂಗಳೂರಿನ ನಂದಿನಿ ಲೇಔಟ್‌ನ ಮೆ: ಶ್ರೀ ಸಾಯಿ ವಿಮಲ್ ಕ್ಲಿನಿಕ್ ಪ್ರಕರಣ ದಾಖಲಿಸಿ ಔಷಧ ಮತ್ತು ಕಾಂತಿವರ್ಧಕ ಅದಿನಿಯಮ ಉಲಂಘನೆ ಮಾಡಿದ್ದಕ್ಕಾಗಿ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ, ಬೆಂಗಳೂರು ಇಲ್ಲಿ ಪ್ರಕರಣ ದಾಖಲಿಸಿ ಇಬ್ಬರು ಆರೋಪಿಗಳಿಂದ ತಲಾ 1,00,00 ರೂ. ಹಾಗೂ ಆರೋಪಿ 3 ರಿಂದ 24 ರವರೆಗಿನ ಆರೋಪಿಗಳಿಂದ ತಲಾ 20,000 ರೂ. ದಂಡ ವಸೂಲಿ ಮಾಡಲಾಗಿದೆ.

ಕಾನ್ಪುರದ ಮೇ ಪಿಲ್ಕೋ ಫಾರ್ಮ ಪ್ರೈ. ಲಿ. ಅವರ ವಿರುದ್ಧ ಎರಡು ಪ್ರಕರಣಗಳನ್ನು ದಾಖಲಿಸಿ ಔಷಧ ಮತ್ತು ಕಾಂತಿವರ್ಧಕ ಅದಿನಿಯಮ ಉಲಂಘನೆ ಮಾಡಿದ್ದಕ್ಕಾಗಿ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ, ಬೆಂಗಳೂರು ಇಲ್ಲಿ ಪ್ರಕರಣ ದಾಖಲಿಸಿ ಇಬ್ಬರು ಆರೋಪಿಗಳಿಂದ ಈ ಎರಡು ಪ್ರಕರಣಕ್ಕೆ ಸಂಬಂದಿಸಿದಂತೆ ತಲಾ 5,000 ರೂ. ನಂತೆ 10,000 ನಂತ ಇಬ್ಬರು ಆರೋಪಿಗಳಿಂದ ಒಟ್ಟು 20,000 ರೂ. ಗಳನ್ನು ದಂಡ ವಸೂಲಿ ಮಾಡಿಕೊಂಡಿದೆ.

ಇಂಡೋರ್ ಮೇ ಕ್ವಿಸ್ಟ್ ಲ್ಯಾಬೋರೇಟರೀಸ್ ಪ್ರೈ. ಲಿ. ಇವರ ವಿರುದ್ಧ ಪ್ರಕರಣ ದಾಖಲಿಸಿ ಔಷಧ ಮತ್ತು ಕಾಂತಿವರ್ಧಕ ಅದಿನಿಯಮ ಉಲಂಘನೆ ಮಾಡಿದ್ದಕ್ಕಾಗಿ ಜೆ.ಎಂ.ಎಫ್. ಸಿ. ನ್ಯಾಯಾಲಯ, ದೊಡ್ಡಬಳ್ಳಾಪುರದಲ್ಲಿ ಪ್ರಕರಣ ದಾಖಲಿಸಿ ಇಬ್ಬರು ಆರೋಪಿಗಳಿಂದ ತಲಾ 20,000 ರೂ. ದಂಡ ವಸೂಲಿ ಮಾಡಲಾಗಿದೆ

ಅಹಮದಾಬಾದ್ ಜಿಲ್ಲೆಯ ಮೆ: ಜೈಡಸ್ ಅನಿಮಲ್ ಹೆಲ್ತ್ ಲಿ, ಪಂಚರತ್ನ ಎಸ್ಟೇಡ್ ಚೆಂಗೋಧರ್ ವಿಲೇಜ್ ಇವರ ವಿರುದ್ಧ ಪ್ರಕರಣ ದಾಖಲಿಸಿ ಅನುತ್ತಮ ಗುಣಮಟ್ಟದ ಔಷಧ ತಯಾರಿಸಿ ವಿತರಣೆ ಮಾಡಿ ಉಲಂಘನೆ ಮಾಡಿದ್ದಕ್ಕಾಗಿ ಜೆ.ಎಂ.ಎಫ್. ಸಇ. ನ್ಯಾಯಾಲಯ, ದೊಡ್ಡಬಳ್ಳಾಪುರಲದಲ್ಲಿ ಪ್ರಕರಣ ದಾಖಲಿಸಿ ಔಷಧ ಮತ್ತು ಕಾಂತಿವರ್ಧಕ ಅದಿನಿಯಮ ಉಲಂಘನೆ ಮಾಡಿದ್ದಕ್ಕಾಗಿ ಜೆ.ಎಂ.ಎಫ್‌ಸಿ.ಸಿ. ನ್ಯಾಯಾಲಯ, ದಾವಣಗೆರೆ ಇಲ್ಲಿ ಪ್ರಕರಣ ದಾಖಲಿಸಿ ಆರೋಪಿ 2 ಮತ್ತು 4 ಇವರಿಗೆ ತಲಾ 20,000 ರೂ. ದಂಡ ವಿಧಿಸಿ ನಾಯ್ಯಾಲಯದ ಅವಧಿ ಮುಗಿಯುವರೆಗೆ ಸಾದಾ ಜೈಲು ಶಿಕ್ಷೆಯನ್ನು ವಿಧಿಸಿ ತೀರ್ಪು ನೀಡಿದೆ ಎಂದು ಔಷಧ ನಿಯಂತ್ರಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 169/289

# "ಬೆಳ್ಳಿ ಹೆಜ್ಜೆ" ಕಾರ್ಯಕ್ರಮ

ಬೆಂಗಳೂರು, ಅಕ್ಟೋಬರ್ 09 ( ಕರ್ನಾಟಕ ವಾರ್ತೆ) :

ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ ಅಕ್ಟೋಬರ್ 10 ರ ಮಂಗಳವಾರದಂದು ಸಂಜೆ 5-00 ಗಂಟೆಗೆ ನಗರದ ಮಹದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಕುಮಾರಪಾರ್ಕ್ ರಸ್ತೆ, ಬೆಂಗಳೂರು ಇಲ್ಲಿ "ಬೆಳ್ಳಿ ಹೆಜ್ಜೆ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಲಹರಿ ಸಂಸ್ಥೆಯ ಜಿ. ಮನೋಹರನ್ ನಾಯ್ಡು ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದು, ಸುಧಾ ವಾರಪತ್ರಿಕೆಯ ಸಹಾಯಕ ಸಂಪಾದಕ ಬಿ.ಎಂ. ಹನೀಫ್ ಅವರು ಸಂವಾದ ನಡೆಸಿಕೊಡಲಿದ್ದಾರೆ.

ನಿವೃತ್ತ ಪ್ರಧಾನ ಕಾರ್ಯದರ್ಶಿ ಐ.ಎಂ. ವಿಠ್ಠಲಮೂರ್ತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಡಾ. ಪಿ.ಎಸ್. ಹರ್ಷ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು, ಖ್ಯಾತ ಚಲನಚಿತ್ರ ನಟ ಹಾಗೂ ನಿರ್ದೇಶಕ ವಿ. ರವಿಚಂದ್ರನ್ ಹಾಗೂ ಖ್ಯಾತ ಚಲನಚಿತ್ರ ಸಂಗೀತ ನಿರ್ದೇಶಕ ಹಂಸಲೇಖ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಎಸ್. ವಿ. ರಾಜೇಂದ್ರಸಿಂಗ್ ಬಾಬು ಅವರು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಮನೋಹರ್‌ನ್ ನಾಯ್ಡು ಅವರ ಕುರಿತ ಸಾಕ್ಷ್ಯಚಿತ್ರ ಹಾಗೂ ಛಾಯಾಚಿತ್ರ ಪ್ರದರ್ಶನವನ್ನು ಸಹ ಹಮ್ಮಿಕೊಂಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್